# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 82(871) |
| ಸದಸ್ಯರ ಹೆಸರು | : | ಶ್ರೀ ಮುನಿರಾಜು ಗೌಡ ಪಿ.ಎಂ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 26.12.2022 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಸಕಾಲ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | 2012-13 ಮತ್ತು 2014-15 ನೇ ಸಾಲಿನಲ್ಲಿ ನಡೆದ ಸಹ ಶಿಕ್ಷಕರ ನೇಮಕಾತಿಯಲ್ಲಿ ಅಕ್ರಮವಾಗಿ ನೇಮಕವಾದ ಶಿಕ್ಷಕ/ಶಿಕ್ಷಕಿಯರ ಸಂಖ್ಯೆ ಎಷ್ಟು; ಈ ಅಕ್ರಮದಲ್ಲಿ ಭಾಗಿಯಾದ ಶಿಕ್ಷಣ ಇಲಾಖೆಯ ಅಧಿಕಾರಿ/ನೌಕರರುಗಳು ಯಾರಾರು; | 2012-13 ಮತ್ತು 2014-15 ನೇ ಸಾಲಿನಲ್ಲಿ ನಡೆದ ಸಹ ಶಿಕ್ಷಕರ ನೇಮಕಾತಿಯಲ್ಲಿ ಅಕ್ರಮ ನೇಮಕಾಗಿ ಬಗ್ಗೆ ಎಫ್.ಐ.ಆರ್ ದಾಖಲಿಸಿ ಹೆಚ್ಚಿನ ತನಿಖೆಗಾಗಿ ಸಿ.ಐ.ಡಿ ಗೆ ವಹಿಸಲಾಗಿದೆ. ತನಿಖೆ ಪ್ರಗತಿಯಲ್ಲಿದ್ದು, ಈವರೆಗೆ ಅಕ್ರಮವಾಗಿ ನೇಮಕವಾದ ಒಟ್ಟು 82 ಶಿಕ್ಷಕರು ಭಾಗಿಯಾಗಿರುವುದು ಕಂಡುಬಂದಿದೆ ಹಾಗೂ ಈ ಅಕ್ರಮದಲ್ಲಿ ಭಾಗಿಯಾಗಿರುವ 5ಅಧಿಕಾರಿ ಮತ್ತು ಒಬ್ಬ ಸಿಬ್ಬಂದಿ ವಿವರವನ್ನು **ಅನುಬಂಧ-1**ರಲ್ಲಿ ಒದಗಿಸಿದೆ. ಒಟ್ಟು 58 ಜನ ಶಿಕ್ಷಕ ಮತ್ತು 06 ಜನ ಅಧಿಕಾರಿ/ಕಛೇರಿ ಸಿಬ್ಬಂದಿಗಳನ್ನು ಬಂಧಿಸಲಾಗಿದೆ. |
| ಆ) | ಇಲ್ಲಿಯವರೆಗೂ ಅಕ್ರಮದಲ್ಲಿ ಭಾಗಿಯಾದ ಎಷ್ಟು ಜನ ಶಿಕ್ಷಕ/ಶಿಕ್ಷಕಿಯರುಗಳನ್ನು ಮತ್ತು ಅಧಿಕಾರಿಗಳನ್ನು ಬಂಧಿಸಲಾಗಿದೆ; | |
| ಇ) | ಸದರಿ ನೇಮಕಾತಿಯಲ್ಲಿ ಪ್ರತಿ ಶಿಕ್ಷಕ/ಶಿಕ್ಷಕಿಯರಿಂದ ಪಡೆದ ಹಣವೆಷ್ಟು; | ಪ್ರಕರಣವು ಇನ್ನೂ ತನಿಖಾ ಹಂತದಲ್ಲಿರುವುದರಿಂದ ಅಧಿಕೃತ ಮಾಹಿತಿ ಲಭ್ಯವಿರುವುದಿಲ್ಲ. |
| ಈ) | ಸದರಿ ನೇಮಕಾತಿಯಲ್ಲಿ ಅಕ್ರಮವಾಗಿ ನೇಮಕವಾದವರ ಮೇಲೆ ಮತ್ತು ಈ ಅಕ್ರಮದಲ್ಲಿ ಭಾಗಿಯಾದ ಅಧಿಕಾರಿಗಳ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು; | ಎಫ್.ಐ.ಆರ್ ದಾಖಲಿಸಿ ಪ್ರಕರಣವನ್ನು ಹೆಚ್ಚಿನ ತನಿಖೆಗಾಗಿ ಸಿ.ಐ.ಡಿ ಗೆ ವಹಿಸಲಾಗಿದ್ದು, ಅಕ್ರಮ ನೇಮಕಾತಿ ಆರೋಪಿತ ಶಿಕ್ಷಕರು ಮತ್ತು ಅಕ್ರಮದಲ್ಲಿ ಭಾಗಿಯಾಗಿರುವ ಆರೋಪಿತ ಅಧಿಕಾರಿ/ಸಿಬ್ಬಂದಿಗಳನ್ನು ಶಿಸ್ತುಕ್ರಮ ಕಾಯ್ದಿರಿಸಿ ಅಮಾನತ್ತುಗೊಳಿಸಲಾಗಿದೆ. |
| ಉ) | ಮುಂದಿನ ದಿನಗಳಲ್ಲಿ ಈ ರೀತಿ ಅಕ್ರಮಗಳು ನಡೆಯದಂತೆ ಸರ್ಕಾರ ಕೈಗೊಂಡ ಕ್ರಮಗಳೇನು? | ಪರೀಕ್ಷಾ ತಂತ್ರಾಂಶ ಖಾಸಗಿ ಸಂಸ್ಥೆಗಳ ಬದಲಾಗಿ ಎನ್.ಐ.ಸಿ/ಎಸ್.ಡಿ.ಸಿ. ಸರ್ಕಾರಿ ಸಂಸ್ಥೆಗಳ ಸಹಕಾರ ಮತ್ತು ಮಾರ್ಗದರ್ಶನದಲ್ಲಿ ಅರ್ಜಿ, ಪರೀಕ್ಷೆ, ಮೌಲ್ಯಮಾಪನ, ಆಯ್ಕೆಪಟ್ಟಿ ತಯಾರಿಸಲು ಕ್ರಮವಹಿಸಲಾಗುತ್ತಿದೆ. ಆದ್ದರಿಂದ ದತ್ತಾಂಶ ಸುರಕ್ಷಿತವಾಗಿರುತ್ತದೆ.<br>ವಿಷಯ ಪರಿಣಿತರಿಂದ ಒಂದು ವಿಷಯಕ್ಕೆ ನಾಲ್ಕು ವಿಭಿನ್ನ ಪಶ್ನೆ ಪತ್ರಿಕೆಗಳನ್ನು ತಯಾರಿಸಿ ಅದರಲ್ಲಿ ಎರಡನ್ನು ಮುದ್ರಿಸಿ ಒಂದು ಪತ್ರಿಕೆಯನ್ನು ಬ್ಯಾಂಕ್‌ನಲ್ಲಿ |

| | | |
|---|---|---|
| | | ಮತ್ತು ಇನ್ನೊಂದು ಪ್ರಶ್ನೆ ಪತ್ರಿಕೆಯನ್ನು ಖಜಾನೆಯಲ್ಲಿ ಇರಿಸಲಾಗುತ್ತದೆ. ಪರೀಕ್ಷೆಯ ದಿನದಂದು ಯಾವ ಪ್ರಶ್ನೆ ಪತ್ರಿಕೆಯನ್ನು ವಿತರಿಸಬೇಕೆಂದು ನಿರ್ಧರಿಸಿ ವಿತರಿಸಲಾಗುತ್ತದೆ.<br>ಪರೀಕ್ಷಾ ಕೇಂದ್ರಗಳಲ್ಲಿ ಎರಡು ಹಂತದ ತಪಾಸಣೆ ಮಾಡಿ ಮೊಬೈಲ್ ಮತ್ತು ಇತರೆ ಎಲೆಕ್ಟ್ರಾನಿಕ್ ಪರಿಕರಗಳನ್ನು ನೂರು ಮೀಟರ್ ಅಂತರ ಕೌಂಟರ್ ಸ್ಥಾಪಿಸಿ ಅದರಲ್ಲಿರಿಸಲಾಗುತ್ತದೆ.<br>ಜಿಲ್ಲಾ ಹಂತದಲ್ಲಿ ಪರೀಕ್ಷಾ ಮೇಲ್ವಿಚಾರಣೆಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ಸಾರ್ವಜನಿಕ ಶಿಕ್ಷಣ ಇಲಾಖೆಯ ಜಿಲ್ಲಾ ಉಪ ನಿರ್ದೇಶಕರ ತ್ರಿಸದಸ್ಯ ಸಮಿತಿಯನ್ನು ರಚಿಸಲಾಗಿದೆ.<br>ಪರೀಕ್ಷಾ ಪ್ರಶ್ನೆ ಪತ್ರಿಕೆಗಳ ಆಗಮನದಿಂದ ಉತ್ತರ ಪತ್ರಿಕೆಗಳನ್ನು ಜಿ.ಪಿ.ಎಸ್ ಹೊಂದಿದ ವಾಹನದಲ್ಲಿ ಮೌಲ್ಯಮಾಪನ ಕೇಂದ್ರಗಳಿಗೆ ತಲುಪಿಸುವವರೆಗೆ ವಿಡಿಯೋ ಚಿತ್ರೀಕರಣ ಮತ್ತು ಪರೀಕ್ಷಾ ಕೇಂದ್ರಗಳಲ್ಲಿ ಸಿ.ಸಿ.ಟಿ.ವಿ. ಅಳವಡಿಸಲಾಗುತ್ತಿದೆ.<br>ಕ್ಯೂಆರ್ ಕೋಡ್ ಹೊಂದಿರುವ ಉತ್ತರ ಪತ್ರಿಕೆಗಳನ್ನು ಎರಡು ಬಾರಿ ಡಿಜಿಟಲ್ ಮೌಲ್ಯಮಾಪನಕ್ಕೆ ಒಳಪಡಿಸಲಾಗುತ್ತದೆ.<br>ತಾತ್ಕಾಲಿಕ ಆಯ್ಕೆಪಟ್ಟಿಯನ್ನು ಜಿಲ್ಲಾ ಹಂತದಲ್ಲಿ ಪ್ರಕಟಿಸಿ ಆಕ್ಷೇಪಣೆಗಳನ್ನು ಸ್ವೀಕರಿಸಿ, ಅರ್ಹ ಆಕ್ಷೇಪಣೆಗಳನ್ನು ಪರಿಗಣಿಸಿ ಅಂತಿಮ ಪಟ್ಟಿಯನ್ನು ಪ್ರಕಟಿಸಲು ಕ್ರಮವಹಿಸಲಾಗುತ್ತಿದೆ. |

ಸಂಖ್ಯೆ: ಇಪಿ 640 ಎಸ್‌ಇಎಸ್ 2022

(ಬಿ.ಸಿ.ನಾಗೇಶ್)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ
ಹಾಗೂ ಸಕಾಲ ಸಚಿವರು

## ಅನುಬಂಧ-1

2012-13 ಮತ್ತು 2014-15 ನೇ ಸಾಲಿನಲ್ಲಿ ನಡೆದ ಪ್ರೌಢ ಶಾಲಾ ಸಹ ಶಿಕ್ಷಕರ ನೇಮಕಾತಿಯಲ್ಲಿ ಅಕ್ರಮದಲ್ಲಿ ಭಾಗಿಯಾಧ ಅಧಿಕಾರಿ/ಸಿಬ್ಬಂದಿಗಳ ವಿವರ:

| ಕ್ರ.ಸಂ | ಅಧಿಕಾರಿ/ನೌಕರರ ಹೆಸರು. | ಹುದ್ದೆ |
|---|---|---|
| 1 | ಶ್ರೀ ಎಂ.ಪಿ.ಮಾದೇಗೌಡ | ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ಪಠ್ಯಪುಸ್ತಕ ಸಂಘ, ಬೆಂಗಳೂರು. |
| 2 | ಶ್ರೀಮತಿ ಗೀತಾ ಎಸ್., | ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು. |
| 3 | ಶ್ರೀ ಡಿ.ಕೆ ಶಿವಕುಮಾರ್ | ನಿರ್ದೇಶಕರು(ನಿವೃತ್ತ) |
| 4 | ಶ್ರೀ ಕೆ.ರತ್ನಯ್ಯ | ಸಹ ನಿರ್ದೇಶಕರು(ನಿವೃತ್ತ) |
| 5 | ಶ್ರೀ ಜಿ.ಆರ್.ಬಸವರಾಜು | ಸಹ ನಿರ್ದೇಶಕರು(ನಿವೃತ್ತ) |
| 6 | ಶ್ರೀ ಕೆ.ಎಸ್.ಪ್ರಸಾದ್ | ಪ್ರಥಮ ದರ್ಜೆ ಸಹಾಯಕ, |